ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಆಗಸ್ಟ್ 12, 2020

**ವಿಶೇಷ ಪತ್ರಿಕಾ ಆಮಂತ್ರಣ**

**ಭಾರತದ 74 ನೇ ಸ್ವಾತಂತ್ರ್ಯ ದಿನಾಚರಣೆಯ ರಾಜ್ಯ ಮಟ್ಟದ ಸಮಾರಂಭ**

**ಈ ಬಾರಿಯ ಸ್ವಾತಂತ್ರ್ಯ ದಿನಾಚರಣೆಯ ವಿಶೇಷತೆ ಮತ್ತು ಸುರಕ್ಷತೆ ಕುರಿತ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡುವವರು :**

**ಎನ್. ಮಂಜುನಾಥ ಪ್ರಸಾದ್, ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**
**ಕಮಲ್ ಪಂತ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಹಾಗೂ**
**ಜಿ ಎನ್ ಶಿವಮೂರ್ತಿ, ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ**

**ದಿನಾಂಕ : 13–08–2020 ಗುರುವಾರ ಸಮಯ : ಬೆಳಿಗ್ಗೆ 9–00 ಗಂಟೆ**
**ಸ್ಥಳ : ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪೆರೇಡ್ ಮೈದಾನ, ರಾಜಭವನ ರಸ್ತೆ, ಬೆಂಗಳೂರು**

**ಪತ್ರಿಕಾ ಪ್ರಕಟಣೆ**

# ಕರ್ನಾಟಕ ಲೋಕ ಸೇವಾ ಆಯೋಗದ ಪರೀಕ್ಷೆಗಳ ದಿನಾಂಕ ಪ್ರಕಟ

**ಬೆಂಗಳೂರು, ಆಗಸ್ಟ್ 12 ( ಕರ್ನಾಟಕ ವಾರ್ತೆ ) :**

ಕರ್ನಾಟಕ ಲೋಕ ಸೇವಾ ಆಯೋಗವು ವಿವಿಧ ಇಲಾಖೆಯ ಹುದ್ದೆಗಳ ಪೂರ್ವಭಾವಿ ಹಾಗೂ ಇಲಾಖಾ ಪರೀಕ್ಷೆಗಳ ದಿನಾಂಕಗಳನ್ನು ಪ್ರಕಟಿಸಿದ್ದು, ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ.

ದಿನಾಂಕ 17–08–2020 ರಂದು ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಸಮೂಹ 'ಎ' ವೃಂದದ ಸಹಾಯಕ ನಿಯಂತ್ರಕರು 54 ಹುದ್ದೆಗಳಿಗೆ ಪೂರ್ವಭಾವಿ ಪರೀಕ್ಷೆಯನ್ನು ಬೆಂಗಳೂರು ಕೇಂದ್ರ ಹಾಗೂ ಆಯೋಗದ ವಿಭಾಗೀಯ ಕೇಂದ್ರಗಳಾದ ಮೈಸೂರು, ಬೆಳಗಾವಿ, ಕಲಬುರಗಿ, ಶಿವಮೊಗ್ಗದಲ್ಲಿ ನಡೆಸುತ್ತದೆ.

2020ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳನ್ನು ದಿನಾಂಕ 18–08–2020 ರಿಂದ 16–09–2020 ರವರೆಗೆ ನಡೆಯುತ್ತದೆ.

ದಿನಾಂಕ 24–08–2020 ರಂದು ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ 'ಎ' ಮತ್ತು 'ಬಿ' ವೃಂದದ ಒಟ್ಟು 106 ಹುದ್ದೆಗಳ ಪೂರ್ವಭಾವಿ ಪರೀಕ್ಷೆಯನ್ನು ಬೆಂಗಳೂರು ಕೇಂದ್ರ, ಬೆಳಗಾವಿ, ಬಳ್ಳಾರಿ, ದಾವಣಗೆರೆ, ಧಾರವಾಡ/ಹುಬ್ಬಳ್ಳಿ, ಕಲಬುರಗಿ, ಮಂಗಳೂರು, ಮೈಸೂರು, ರಾಯಚೂರು ಮತ್ತು ಶಿವಮೊಗ್ಗದಲ್ಲಿ ನಡೆಯುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## “ಕೃಷಿ ಪಂಡಿತ” ಹಾಗೂ “ಬೆಳೆಸ್ಪರ್ಧೆ” ಪ್ರಶಸ್ತಿಗೆ ಅರ್ಜಿ ಆಹ್ವಾನ

**ಬೆಂಗಳೂರು, ಆಗಸ್ಟ್ 12 ( ಕರ್ನಾಟಕ ವಾರ್ತೆ ) :**

ಕೃಷಿ ಕ್ಷೇತ್ರದಲ್ಲಿ ವಿನೂತನ ಅನ್ವೇಷಣೆ ಮತ್ತು ಸೃಜನಾತ್ಮಕವಾಗಿ ಕೃಷಿ ಸಾಧನೆ ಮಾಡಿದ ಸೃಜನಶೀಲ ರೈತರಿಂದ 2020–21ನೇ ಸಾಲಿನ “ಕೃಷಿ ಪಂಡಿತ” ಹಾಗೂ “ಬೆಳೆ ಸ್ಪರ್ಧೆ” ಪ್ರಶಸ್ತಿಗಳಿಗಾಗಿ ರಾಜ್ಯ ಕೃಷಿ ಇಲಾಖೆ ಅರ್ಜಿಗಳನ್ನು ಆಹ್ವಾನಿಸಿದೆ.

ರೈತರು ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಅರ್ಹತೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ವಿಸ್ತರಣಾ ಕಾರ್ಯಕರ್ತರನ್ನಾಗಲಿ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ. “ಕೃಷಿ ಪಂಡಿತ” ಪ್ರಶಸ್ತಿಗೆ ಅರ್ಜಿ ಸಲ್ಲಿಸಲು 07ನೇ ಸೆಪ್ಟೆಂಬರ್ 2020 ಕೊನೆಯ ದಿನವಾಗಿರುತ್ತದೆ.

“ಬೆಳೆ ಸ್ಪರ್ಧೆ” ಪ್ರಶಸ್ತಿಯನ್ನು ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ನೀಡಲಾಗುತ್ತಿದ್ದು, ಈ ಕೃಷಿ ಪ್ರಶಸ್ತಿಗೆ ರೈತರು ನಿಗದಿತ ನಮೂನೆಯಲ್ಲಿ ಒಂದೇ ಅರ್ಜಿ ಸಲ್ಲಿಸಬೇಕು. ಪ.ಜಾ/ಪ.ವರ್ಗದ ರೈತರಿಗೆ ರೂ.25.00 ಮತ್ತು ಸಾಮಾನ್ಯ ರೈತರಿಗೆ ರೂ.100.00 ಪ್ರವೇಶ ಶುಲ್ಕ ಭರಿಸಬೇಕಾಗುತ್ತದೆ. 2020–21ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸ್ಪರ್ಧೆ ಪ್ರಶಸ್ತಿಗಳಿಗಾಗಿ ರೈತರು ಅರ್ಜಿ ಸಲ್ಲಿಸಲು 15ನೇ ಸೆಪ್ಟೆಂಬರ್ 2020 ಕೊನೆಯ ದಿನಾಂಕವಾಗಿರುತ್ತದೆ.

ಸ್ಪರ್ಧಿಸಬಹುದಾದ ಬೆಳೆಗಳ ವಿವರಗಳು, ಅರ್ಜಿ ನಮೂನೆ, ಸ್ಪರ್ಧಿಸಲು ಅರ್ಹತೆ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ವಿಸ್ತರಣಾ ಕಾರ್ಯಕರ್ತರು ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಲು ಕೋರಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಆಗಸ್ಟ್ 12 ( ಕರ್ನಾಟಕ ವಾರ್ತೆ ) :**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಸುರೇಶ್‌ಕುಮಾರ್ ಅವರು 13ನೇ ಆಗಸ್ಟ್ ರಂದು ಮಂಡ್ಯ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂದಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅತಿಥಿಉಪನ್ಯಾಸಕರ ಹುದ್ದೆಗೆ ಅರ್ಜಿ

**ಬೆಂಗಳೂರು, ಆಗಸ್ಟ್ 12 ( ಕರ್ನಾಟಕ ವಾರ್ತೆ ) :**

ಬೆಂಗಳೂರು ವಿಶ್ವವಿದ್ಯಾಲಯ ಜ್ಞಾನಭಾರತಿ ಆವರಣದಲಿರುವ ವಾಣಿಜ್ಯ ಶಾಸ್ತ್ರವಿಭಾಗದಲ್ಲಿ M.Com, M.Com (FA),& MTTM ಕೋರ್ಸ್‌ಗಳಿಗೆ 2020–21ರ ಶೈಕ್ಷಣಿಕ ವರ್ಷಕ್ಕೆಅತಿಥಿಉಪನ್ಯಾಸಕರ ಹುದ್ದೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳ ವಿದ್ಯಾರ್ಹತೆ, ಭೋದನಾಅನುಭವ ಮತ್ತು ಸಂಶೋಧನೆಗೆ ಸಂಬಂದಿಸಿದ ಸ್ವವಿವರಗಳೊಂದಿಗೆ ವಿಶ್ವವಿದ್ಯಾಲಯದ ನಿಯಮಾವಳಿಗಳ ಪ್ರಕಾರ ಭರ್ತಿಮಾಡಿದ ಅರ್ಜಿಗಳನ್ನು ದಿನಾಂಕ: 20 ಆಗಸ್ಟ್ 2020ರೊಳಗೆ ಮುಖ್ಯಸ್ಥರು ವಾಣಿಜ್ಯ ಶಾಸ್ತ್ರವಿಭಾಗ, ಬೆಂಗಳೂರು ವಿಶ್ವವಿದ್ಯಾಲಯಜ್ಞಾನಭಾರತಿಬೆಂಗಳೂರು –560056. ಇವರಿಗೆ ಸಲ್ಲಿಸಲು ಸೂಚಿಸಿದೆ.

**ಸಂದರ್ಶನ ನಡೆಯುವ ದಿನಾಂಕ ಮತ್ತು ಸ್ಥಳವನ್ನು ಶ್ರೀಘ್ರದಲ್ಲೆ ತಿಳಿಸಲಾಗುವುದು.** ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080- 2296 1958, 9242188368 ಹಾಗೂ ವೆಬ್ ಸೈಟ್ – bubcommerce2019@gmail.com ಸಂಪರ್ಕಿಸಲು ಕೋರಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## APPLICATIONS INVITED FOR GUEST FACULTY

The Department of Commerce, Bangalore University, Bengaluru invites applications for the post of Guest Faculty to M.Com, M.Com (F & A) and MTTMcourses for the academic year 2020-21. Preference will be given to those candidates who have teaching experience withPh.D/NET/SLET. Interested Candidates may submit their application along with bio-data and relevant certificates to the Chairperson, Department of Commerce, Jnanbharathi campus, Bangalore University, Bengaluru – 560056 on or before 20/08/2020.For more details contact 080-22961958 says press release

## ನಮಗಿಲ್ಲದ ಸೌಲಭ್ಯ ಹಾಲಿವುಡ್ ಗೆ ನೀಡುವುದು ಸರಿಯಲ್ಲ : ಟಿ.ಎಸ್.ನಾಗಾಭರಣ

**ಬೆಂಗಳೂರು, ಆಗಸ್ಟ್ 12 ( ಕರ್ನಾಟಕ ವಾರ್ತೆ ) :**

ಕನ್ನಡದ ನೆಲ-ಜಲ, ಸವಲತ್ತುಗಳನ್ನು ಬಳಸಿಕೊಂಡು ಬೃಹತ್ತಾಗಿ ಬೆಳೆದಿರುವ ಐಟಿಬಿಟಿ ಸಂಸ್ಥೆಗಳಲ್ಲಿ ಕನ್ನಡಿಗರಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಕ್ರಮಕೈಗೊಳ್ಳಬೇಕೆಂದು **ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ** ಅವರು ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯ ನಿರ್ದೇಶಕರಾದ ಮೀನಾ ನಾಗಾರಾಜ್ ಅವರಿಗೆ ತಾಕೀತು ಮಾಡಿದರು.

ಐಟಿಬಿಟಿ ಸಂಸ್ಥೆಗಳು ಕನ್ನಡಿಗರನ್ನು ಕಡೆಗಣಿಸುತ್ತಿವೆ, ಅಲ್ಲದೆ ಕನ್ನಡಿರಿಗೆ ಸಿಗಬೇಕಾದ ಉದ್ಯೋಗಗಳು ಅನ್ಯಭಾಷಿಕರ ಪಾಲಾಗುತ್ತಿವೆ ಎಂಬ ದೂರುಗಳು ಪ್ರಾಧಿಕಾರಕ್ಕೆ ಬರುತ್ತಿರುವ ಹಿನ್ನೆಲೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಜಾಲ ಸಂಪರ್ಕ (ಆನ್ ಲೈನ್)ದ ಮೂಲಕ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯ ಪರಿಶೀಲನಾ ಸಭೆ ನಡೆಸಿದ ಅವರು, ಈ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರನ್ನು ಕಡೆಗಣಿಸಲಾಗುತ್ತಿರುವ ಬಗ್ಗೆ ದೂರುಗಳು ಪ್ರಾಧಿಕಾರಕ್ಕೆ ಬರುತ್ತಿವೆ. ಈ ಬಗ್ಗೆ ಕೂಡಲೇ ಕ್ರಮವಹಿಸಿ ಪ್ರಾಧಿಕಾರಕ್ಕೆ ವರದಿ ನೀಡುವಂತೆ ಸೂಚಿಸಿದರು.

ಕೆಟಿಐಎಸ್‌ನಲ್ಲಿ ಅನ್ಯಭಾಷಿಕರು ಅಡ್ವೈಜರ್‌ಗಳಾಗಿ ನೇಮಕಗೊಂಡಿರುವುದರಿಂದ ರಾಜ್ಯ ಸರ್ಕಾರದ ಯೋಜನೆಗಳು ಹೊರಗಿನವರ ಪಾಲಾಗುತ್ತಿವೆ. ಇಂತಹ ಅನ್ಯಾಯವನ್ನು ಸಹಿಸಲು ಸಾಧ್ಯವಿಲ್ಲ. ಮುಂದೆ ಹೀಗಾಗಂತೆ ತಡೆಯಲು ಮುಂದಿನ ಹೊಸ ನೀತಿಯಲ್ಲಿ ಕನ್ನಡಿಗರಿಗೆ ಆದ್ಯತೆ ನೀಡುವ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಇಲಾಖಾ ನಿರ್ದೇಶಕರಿಗೆ ಸೂಚಿಸಿದರು.

ಅನಿಮೇಷನ್‌ಗೆ ಸಂಬಂಧಿಸಿದಂತೆ ಕನ್ನಡ ಚಲನಚಿತ್ರ ಕ್ಷೇತ್ರವನ್ನು ಕಡೆಗಣಿಸಲಾಗುತ್ತಿದೆ. ನಮ್ಮ ನಾಡಿನ ಸೌಲಭ್ಯವನ್ನು ಪಡೆದು ಹಾಲಿವುಡ್‌ಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಯೋಜನೆ ರೂಪಿಸಿರುವುದು ಖಂಡನೀಯ. ನಮ್ಮವರು ಕೇರಳ, ಮುಂಬೈ ಮುಂತಾದ ಕಡೆಗಳಿಗೆ ಹೋಗಿ ಅನಿಮೇಷನ್ ಮಾಡಿಕೊಂಡು ಬರುತ್ತಿದ್ದಾರೆ. ಆದರೆ ನಮ್ಮ ನೆಲೆದಲ್ಲಿ ನಮಗೆ ಇದರ ಉಪಯೋಗ ಪಡೆಯಲು ಸಾಧ್ಯವಾಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಅಲ್ಲದೆ 2 ವರ್ಷಗಳ ಹಿಂದೆ ನಡೆದ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಪರಿಶೀಲನೆಗೆ ಸಂಬಂಧಿಸಿದಂತೆ ಯಾವುದೇ ಅನುಪಾಲನಾ ವರದಿಯನ್ನು ಇದೂವರೆಗೂ ನೀಡದೆ ಇರುವುದು ಸರಿಯಲ್ಲ. ಇಲಾಖಾ ವ್ಯಾಪ್ತಿಯ ಜಾಲತಾಣಗಳು ಕೂಡ ಇಂಗ್ಲಿಷ್‌ನಲ್ಲಿದ್ದು ಕೂಡಲೇ ಇದನ್ನು ಕನ್ನಡೀಕರಣ ಮಾಡಲು ಶೀಘ್ರವೇ ಕ್ರಮಕೈಗೊಳ್ಳುವಂತೆ ಸೂಚಿಸಿದರು.

ಮಾನ್ಯ ಮುಖ್ಯಮಂತ್ರಿಗಳ ಇ-ಆಡಳಿತ ಸಲಹೆಗಾರರಾದ ಬೇಳೂರು ಸುದರ್ಶನ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯ ನಿರ್ದೇಶಕರಾದ ಶ್ರೀಮತಿ ಮೀನಾ ನಾಗರಾಜ್, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಕೆ.ಮುರಳಿಧರ, ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಡಾ.ವೀರಶೆಟ್ಟಿ, ವೆಬ್ ಪೋರ್ಟಲ್ನ ಯೋಜನಾಧಿಕಾರಿ ಸತೀಶ್ ಮತ್ತಿತರರು ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡಿದ್ದರು.

- ನಮ್ಮ ನಾಡಿನ ಸೌಲಭ್ಯ ಪಡೆದು ಹಾಲಿವುಡ್‌ಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಯೋಜನೆ ರೂಪಿಸಿರುವುದು ಖಂಡನೀಯ.
- ರಾಜ್ಯ ಸರ್ಕಾರದ ಯೋಜನೆಗಳು ಹೊರಗಿನವರ ಪಾಲಾಗುತ್ತಿವೆ. ಇಂತಹ ಅನ್ಯಾಯವನ್ನು ಸಹಿಸಲು ಸಾಧ್ಯವಿಲ್ಲ.
- ಹೊಸ ನೀತಿಯಲ್ಲಿ ಕನ್ನಡಿಗರಿಗೆ ಆದ್ಯತೆ ನೀಡುವ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸೂಚನೆ

## ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯಾಗಿ ಡಾ.ಎನ್.ನಾಗಾಂಬಿಕಾ ದೇವಿ

**ಬೆಂಗಳೂರು, ಆಗಸ್ಟ್ 12 ( ಕರ್ನಾಟಕ ವಾರ್ತೆ ) :**

**ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯಾಗಿ ಡಾ.ಎನ್.ನಾಗಾಂಬಿಕಾ ದೇವಿ ಅವರು ಆಗಸ್ಟ್ 12 ರಂದು ಅಧಿಕಾರವಹಿಸಿಕೊಂಡಿದ್ದು, ತಮ್ಮ ಗಮನ ಸೆಳೆಯುವ ಅರೆ ಸರ್ಕಾರಿ ಹಾಗೂ ಮುಖ್ಯ ಪತ್ರ ವ್ಯವಹಾರವನ್ನು ಕೊಠಡಿ ಸಂಖ್ಯೆ 233, 2ನೇ ಮಹಡಿ, ವಿಕಾಸಸೌಧ, ಬೆಂಗಳೂರು–560 001 ಇಲ್ಲಿಗೆ ಕಳುಹಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

**ದೂರವಾಣಿ ಮುಖಾಂತರ ಅವರನ್ನು ಸಂಪರ್ಕಿಸಲು 080–22034567, 080–22254820, ಫ್ಯಾಕ್ಸ್ 080–22254820 ಅಥವಾ ಇಮೇಲ್ prssocialwelfare@gmail.com ಗೆ ಮೇಲ್ ಮಾಡಬಹುದಾಗಿದೆ.**

# ಸಚಿವರ ಪ್ರವಾಸ

**ಬೆಂಗಳೂರು, ಆಗಸ್ಟ್ 12 ( ಕರ್ನಾಟಕ ವಾರ್ತೆ ) :**

**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆ ಸಚಿವ ಜಗದೀಶ ಶೆಟ್ಟರ ಅವರು 14ನೇ ಆಗಸ್ಟ್ ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಹುಬ್ಬಳ್ಳಿಗೆ ಹಿಂದಿರುಗಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**